ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ : ಇಡಿ/ಕೆಇಎ/ಆಡಳಿತ/ಸಿಆರ್.04/2026 ದಿನಾಂಕ:26.04.2026

# ಪ್ರಕಟಣೆ

## ಯುಜಿಸಿಇಟಿ 2026ರ ಪರೀಕ್ಷೆಗೆ ಸಂಬಂಧಿಸಿದಂತೆ ಕೀ ಉತ್ತರಗಳನ್ನು ಪ್ರಕಟಿಸುವ ಬಗ್ಗೆ.

*******

ಯುಜಿಸಿಇಟಿ 2026ರ ಪರೀಕ್ಷೆಯ ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತಶಾಸ್ತ್ರ ಮತ್ತು ಜೀವಶಾಸ್ತ್ರ ವಿಷಯಗಳಿಗೆ ಸಂಬಂಧಿಸಿದಂತೆ ದಿನಾಂಕ:23.04.2026 ಮತ್ತು 24.04.2026 ರಂದು ಪರೀಕ್ಷೆಗಳನ್ನು ನಡೆಸಲಾಗಿದ್ದು, ಸದರಿ ಪರೀಕ್ಷೆಯಲ್ಲಿನ 16 ವರ್ಷನ್‌ಗಳ ಕೀ ಉತ್ತರಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿರುತ್ತದೆ.

ಪ್ರಕಟಿತ ಕೀ ಉತ್ತರಗಳಿಗೆ ಆಕ್ಷೇಪಣೆಗಳಿದ್ದಲ್ಲಿ, ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಒದಗಿಸಲಾದ ಆನ್‌ಲೈನ್ ಪೋರ್ಟಲ್ https://cetonline.karnataka.gov.in/kea/ ಲಿಂಕ್ ಮೂಲಕ ಮಾತ್ರವೇ **ದಿನಾಂಕ:30.04.2026 ಸಂಜೆ 5:00** ರೊಳಗೆ ಆಕ್ಷೇಪಣೆ ಸಲ್ಲಿಸಬಹುದಾಗಿರುತ್ತದೆ.

ಆಕ್ಷೇಪಣೆಗಳನ್ನು ಸಲ್ಲಿಸುವ ಸಂದರ್ಭದಲ್ಲಿ ಪತ್ರಿಕೆಯ ವಿವರ, ಪರೀಕ್ಷಾ ದಿನಾಂಕ, ವರ್ಷನ್ ಕೋಡ್, ಪ್ರಶ್ನೆ ಸಂಖ್ಯೆ ಹಾಗೂ ಪೂರಕ ದಾಖಲೆಗಳನ್ನು PDF ರೂಪದಲ್ಲಿ ಸಲ್ಲಿಸಬೇಕು. ಪ್ರಶ್ನೆ ಸಂಖ್ಯೆ ಅಥವಾ ವರ್ಷನ್ ಕೋಡ್ ನಮೂದಿಸದೇ ಇರುವ ಅಥವಾ ಆಧಾರರಹಿತವಾಗಿರುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

**ವಿಷಯ ತಜ್ಞರ ಸಮಿತಿಯು ಪರಿಶೀಲಿಸಿ ತೀರ್ಮಾನಿಸುವ ಕೀ ಉತ್ತರಗಳು ಅಂತಿಮವಾಗಿರುತ್ತವೆ.**

ಕಾರ್ಯನಿರ್ವಾಹಕ ನಿರ್ದೇಶಕರು

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in